# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು – 572 103

ಸಂಖ್ಯೆ: ತುವಿ/ಸಂ.ವಿ:/2024-25/1250 ದಿನಾಂಕ: 07.01.2025

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ಧಾರವಾಡ ಇವರು ನಡೆಸಲಿರುವ "ಸಂಶೋಧನಾ ವಿಧಾನ" (Research Methodology) ತರಬೇತಿಯಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಇವರ ಪತ್ರ ಸಂಖ್ಯೆ:ಕರಾಉಶಿಅಧಾ/ಸಂಶೋಧನಾ ವಿಧಾನ-4/2024-25/ ದಿನಾಂಕ: 02.01.2024.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದಲ್ಲಿ ವಿವರಿಸಿರುವಂತೆ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ಧಾರವಾಡ ಇವರು ದಿನಾಂಕ: 20.01.2025 ರಿಂದ 26.01.2025 ರವರೆಗೆ ಪಿಹೆಚ್.ಡಿ ಪದವಿಗೆ ನೋಂದಾಯಿಸಿಕೊಂಡ ಸಮಾಜ ವಿಜ್ಞಾನ (Social Science) ನಿಕಾಯದ ಸಂಶೋಧನಾ ವಿದ್ಯಾರ್ಥಿಗಳಿಗೆ "ಸಂಶೋಧನಾ ವಿಧಾನ" (Research Methodology) ಕುರಿತು 07 ದಿನಗಳ ತರಬೇತಿಯನ್ನು ನೀಡಲಾಗುತ್ತಿದ್ದು ಸದರಿ ತರಬೇತಿಯಲ್ಲಿ ಅರೆಕಾಲಿಕ ಹಾಗೂ ಪೂರ್ಣಕಾಲಿಕ ಸಂಶೋಧನಾರ್ಥಿಗಳು ಭಾಗವಹಿಸಬಹುದು. ರಾಜ್ಯದ ಹಾಗೂ ದೇಶದ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಚಟುವಟಿಕೆ ಆಧಾರಿತ ತರಬೇತಿಯನ್ನು ನೀಡಲಾಗುವುದು. ಒಂದು ಬ್ಯಾಚ್‌ನಲ್ಲಿ 40 ಜನ ಶಿಬಿರಾರ್ಥಿಗಳಿಗೆ ಭಾಗವಹಿಸಲು ಅವಕಾಶವಿರುತ್ತದೆ.

ತರಬೇತಿಗೆ ಆಯ್ಕೆಯಾದ ಶಿಬಿರಾರ್ಥಿಗಳಿಗೆ ಓಓಡಿ ಸೌಲಭ್ಯವಿರುತ್ತದೆ. ಸದರಿ ಅಕಾಡೆಮಿಯಲ್ಲಿ ಅಭ್ಯರ್ಥಿಗಳಿಗೆ 07 ದಿನಗಳ ಕಾಲ ಉಚಿತ ಊಟ ಹಾಗೂ ವಸತಿ ವ್ಯವಸ್ಥೆಯು ಲಭ್ಯವಿರುತ್ತದೆ ಮತ್ತು ಮಧ್ಯದಲ್ಲಿ ರಜೆಯ ಸೌಲಭ್ಯವಿರುವುದಿಲ್ಲ.

ಈ ಸಂಬಂಧ ತುಮಕೂರು ವಿಶ್ವವಿದ್ಯಾನಿಲಯದ ಪ್ರಸ್ತುತ 2023-24 ನೇ ಸಾಲಿನಲ್ಲಿ ಪಿಹೆಚ್.ಡಿಗೆ ನೋಂದಣಿಯಾಗಿರುವ ಸಮಾಜ ವಿಜ್ಞಾನ (Social Science) ನಿಕಾಯದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ಪಿಹೆಚ್.ಡಿ ಸಂಶೋಧಕರು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಇವರು ನಡೆಸಲಿರುವ "ಸಂಶೋಧನಾ ವಿಧಾನ" (Research Methodology) ತರಬೇತಿಯಲ್ಲಿ ಭಾಗವಹಿಸಿ ತರಬೇತಿಯ ಸದುಪಯೋಗ ಪಡೆಯುವಂತೆ ಈ ಮೂಲಕ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಯೋಜಕರಾದ ಡಾ. ಮಲ್ಲಿಕಾರ್ಜುನ ಎಸ್. ಮೂಲಿಮನಿ, ಮೊಬೈಲ್ ಸಂಖ್ಯೆ: 9901871972 ಇವರನ್ನು ಸಂಪರ್ಕಿಸುವುದು.

ವಿಶೇಷ ಸೂಚನೆ: "ಸಂಶೋಧನಾ ವಿಧಾನ" (Research Methodology) ತರಬೇತಿಯಲ್ಲಿ ಭಾಗವಹಿಸುವವರು https://forms.gle/f3HYDX1Nx889aZux6 GoogleForm ನಲ್ಲಿ ನೊಂದಾಯಿಸಿಕೊಳ್ಳಲು ದಿನಾಂಕ: 10.01.2025 ಕೊನೆಯ ದಿನಾಂಕವಾಗಿರುತ್ತದೆ.

07/01/202
ನಿರ್ದೇಶಕರು-ಸಂಶೋಧನೆ
ನಿರ್ದೇಶಕರು - ಸಂಶೋಧನೆ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಇವರಿಗೆ,

1. ಅಧ್ಯಕ್ಷರು, ಡಾ. ಡಿ. ವಿ ಗುಂಡಪ್ಪ ಅಧ್ಯಯನ ಕೇಂದ್ರ, ತು.ವಿ.ತು.
2. ಅಧ್ಯಕ್ಷರು, ಸ್ನಾತಕೋತ್ತರ ಇಂಗ್ಲೀಷ್ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
3. ಅಧ್ಯಕ್ಷರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
4. ಅಧ್ಯಕ್ಷರು, ಸ್ನಾತಕೋತ್ತರ ಇತಿಹಾಸ ಮತ್ತು ಪುರಾತತ್ವಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
5. ಅಧ್ಯಕ್ಷರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
6. ಅಧ್ಯಕ್ಷರು, ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.

ಪು.ತಿ.ನೋ

7. ಸಂಯೋಜಕರು, ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
8. ಸಂಯೋಜಕರು, ಸ್ನಾತಕೋತ್ತರ ಪತ್ರಿಕೋದ್ಯಮ & ಸಮೂಹ ಸಂವಹನ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
9. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸತಕ್ಕದ್ದು)

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.